# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸಾಮಾಜಿಕ ಅರಣ್ಯ ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹಾಗೂ ತೆರವಾಗಿರುವ ಹುದ್ದೆಗೆದುರಾಗಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಭಾವನೆಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ-5 ಶಾಖೆಯ ಇ-ಆಫೀಸ್ ಕಡತಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧಜಿಲ್ಲಾ/ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸಾಮಾಜಿಕ ಅರಣ್ಯ ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹಾಗೂ ತೆರವಾಗಿರುವ ಹುದ್ದೆಗೆದುರಾಗಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಭಾವನೆಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2210 ಮತ್ತು 2406ರಡಿ ಒಟ್ಟು ರೂ.286.25ಲಕ್ಷಗಳನ್ನು ಜಿಲ್ಲಾ/ತಾಲ್ಲೂಕು ಪಂಚಾಯತಿ ಕಾರ್ಯಕ್ರಮದಡಿ ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ವೆಚ್ಚ ಶಾಖೆಗಳ ಕಡತಗಳಲ್ಲಿ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.258.37ಲಕ್ಷ ಮತ್ತು ತಾಲ್ಲೂಕು ಪಂಚಾಯತಿ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.27.88ಲಕ್ಷಗಳನ್ನು ಅನುಕ್ರಮವಾಗಿ ಲೆಕ್ಕ ಶೀರ್ಷಿಕೆ 2515-00-196-1-05-300 ಮತ್ತು 2515-00-197-1-10-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 169ವೆಚ್ಚ 6/2021(ಇ) ದಿನಾಂಕ: 15ನೇ ಮಾರ್ಚ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನವೇತನ/ಸಂಭಾವನೆ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರ ಒಟ್ಟು ರೂ.286.25ಲಕ್ಷ (ರೂಪಾಯಿ ಎರಡುನೂರ ಎಂಬತ್ತಾರು ಲಕ್ಷದ ಇಪ್ಪತ್ತೈದು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ/ಸಾಮಾಜಿಕ ಅರಣ್ಯ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು

8. ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ

ಸರ್ಕಾರದ ಆದೇಶ ಸಂಖ್ಯೆ: ಆಇ 169 ವೆಚ್ಚ 6/2021 (ಇ) ದಿನಾಂಕ:15.3.2021ಕ್ಕೆಅನುಬಂಧ

(ರೂ.ಲಕ್ಷಗಳಲ್ಲಿ)

| ಕಡತಸಂಖ್ಯೆ | ಜಿಲ್ಲಾ/ ತಾಲ್ಲೂಕು | ಕಾರ್ಯಕ್ರಮದ ಲೆಕ್ಕಶೀರ್ಷಿಕೆ | 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|---|
| ಆಇ 51 ವೆ-5/2021 ಇ | ಬಳ್ಳಾರಿ | 2210-00-101-0-27-034<br>2210-00-103-0-26-034<br>2210-00-101-0-32-034 | 146.33<br>99.62<br>1.33 | | 247.28 |
| | ದಕ್ಷಿಣಕನ್ನಡ | 2210-00-103-0-26-251 | 4.49 | | 4.49 |
| | ಸಕಲೇಶಪುರ<br>ಅರಕಲಗೂಡು<br>ಸವದತ್ತಿ | 2210-00-101-0-62-005 | | 2.03<br>2.75<br>7.55 | 12.33 |
| | ಬಂಟ್ವಾಳ<br>ಸುಳ್ಯ<br>ಪುತ್ತೂರು | 2210-00-104-0-61-005 | | 1.90<br>0.77<br>8.38 | 11.05 |
| | ನಂಜನಗೂಡು | 2515-00-102-0-61-005 | | 4.50 | 4.50 |
| ಆಇ 108 ವೆಚ್ಚ 5/221(ಇ) | ಬೆಂಗಳೂರು ನಗರ | 2406-00-101-0-26-005 | 11.09 | | 11.09 |
| | **ಒಟ್ಟು** | | **258.37** | **27.88** | **286.25** |

1416046423 1416046512

15.3.2021